**All India Radio: Bangalore**
**National Bulletin In Kannada**
**18.06.2026 07.35 a.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**18.06.2026 07.35 a.m.**

**<><><><>**

ಮುಖ್ಯಾಂಶಗಳು

1. ಫ್ರಾನ್ಸ್‌ನ ಪ್ಯಾರಿಸ್ ತಲುಪಿದ ಪ್ರಧಾನಿ ನರೇಂದ್ರ ಮೋದಿ ; ಇಂದು ವಿವಾ ಟೆಕ್-೨೦೨೬ ಕಾರ್ಯಕ್ರಮದಲ್ಲಿ ಭಾಗಿ
2. ಜಿ-೭ ಶೃಂಗಸಭೆ ; ಜಾಗತಿಕ ಸ್ಥಿರತೆ ಮತ್ತು ಸುಸ್ಥಿರ ಬೆಳವಣಿಗಾಗಿ ಮೂರು ಪ್ರಮುಖ ಘೋಷಣಾ ಪತ್ರಗಳಿಗೆ ಸದಸ್ಯ ರಾಷ್ಟ್ರಗಳ ಅಂಗೀಕಾರ
3. ಭಾರತ-ಯುಕೆ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ ಜುಲೈ ೧೫ ರಿಂದ ಜಾರಿ ; ರಫ್ತು ವಲಯಕ್ಕೆ ಹೆಚ್ಚಿನ ಉತ್ತೇಜನ
4. ಜಾರ್ಖಂಡ್‌ನ ಎರಡು ರಾಜ್ಯಸಭಾ ಸ್ಥಾನಗಳು ಹಾಗೂ ಕರ್ನಾಟಕ ವಿಧಾನಪರಿಷತ್‌ನ ೭ ಸ್ಥಾನಗಳಿಗೆ ಇಂದು ಚುನಾವಣೆ
5. ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್ ; ನೆದರ್‌ಲೆಂಡ್ಸ್ ವಿರುದ್ಧ ಭಾರತಕ್ಕೆ ೯೫ ರನ್ ಜಯ

<><><><>

ಜಿ-೭ ಶೃಂಗಸಭೆಯನ್ನು ಯಶಸ್ವಿಯಾಗಿ ಸಂಪನ್ನಗೊಳಿಸಿ ಪ್ರಧಾನಿ ನರೇಂದ್ರ ಮೋದಿ ತಮ್ಮ ಫ್ರಾನ್ಸ್ ಪ್ರವಾಸದ ಅಂತಿಮ ಚರಣದ ಭಾಗವಾಗಿ ನಿನ್ನೆ ತಡರಾತ್ರಿ ಪ್ಯಾರಿಸ್ ತಲುಪಿದ್ದಾರೆ. ಪ್ಯಾರಿಸ್‌ಗೆ ಆಗಮಿಸಿದ ಪ್ರಧಾನಿಯವರನ್ನು ಅಲ್ಲಿನ ಭಾರತೀಯ ಸಮುದಾಯ ಆತ್ಮೀಯವಾಗಿ ಸ್ವಾಗತಿಸಿತು. ಪ್ರಧಾನಿ ನರೇಂದ್ರ ಮೋದಿ ಇಂದು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರಾನ್ ಅವರೊಂದಿಗೆ ಯುರೋಪಿನ ಅತಿದೊಡ್ಡ ತಂತ್ರಜ್ಞಾನ ಮತ್ತು ನವೋದ್ಯಮ ಸಮಾವೇಶವಾದ 'ವಿವಾಟೆಕ್ ೨೦೨೬' ನಲ್ಲಿ ಭಾಗವಹಿಸಲಿದ್ದಾರೆ. ಈ ಬಾರಿಯ ಶೃಂಗಸಭೆಯಲ್ಲಿ ಭಾರತವು ಅತಿ ದೊಡ್ಡ ಮಳಿಗೆಯನ್ನು ಹೊಂದಿದ್ದು, ಇದು ಭಾರತ ಮತ್ತು ಯುರೋಪ್ ನಡುವಿನ ತಾಂತ್ರಿಕ ಸಹಭಾಗಿತ್ವದ ಬಲವಾದ ಸಂಕೇತವಾಗಿದೆ. ಇಲ್ಲಿ ಪ್ರಧಾನಿಯವರು ಭಾರತದ ಡಿಜಿಟಲ್ ಕ್ರಾಂತಿ

ಮತ್ತು ಜಾಗತಿಕ ತಾಂತ್ರಿಕ ಪ್ರಗತಿಯ ಕುರಿತು ಭಾಷಣ ಮಾಡಲಿದ್ದಾರೆ. ಇನ್ನು ನಿನ್ನೆ ನಡೆದ ಜಿ-೭ ಶೃಂಗಸಭೆಯಲ್ಲಿ ಪ್ರಧಾನಿ ಜಾಗತಿಕ ಆಡಳಿತ ಮತ್ತು ನೀತಿ ನಿರೂಪಣೆಯಲ್ಲಿ ಭಾರತದ ನಿಲುವನ್ನು ಸ್ಪಷ್ಟಪಡಿಸಿದರು. ಜಾಗತಿಕ ಏಳಿಗೆಗಾಗಿ ಜಾಗತಿಕ ದಕ್ಷಿಣ ರಾಷ್ಟ್ರಗಳ ಜೊತೆ ನಿಕಟವಾಗಿ ಕೆಲಸ ಮಾಡುವ ಅಗತ್ಯವನ್ನು ಅವರು ಒತ್ತಿಹೇಳಿದರು. ಅಲ್ಲದೆ, ಪಶ್ಚಿಮ ಏಷ್ಯಾ ಬಿಕ್ಕಟ್ಟಿನಿಂದಾಗಿ ಅಭಿವೃದ್ಧಿಶೀಲ ರಾಷ್ಟ್ರಗಳ ಮೇಲಾಗುತ್ತಿರುವ ಪರಿಣಾಮಗಳ ಕುರಿತು ಕಳವಳ ವ್ಯಕ್ತಪಡಿಸಿದ ಅವರು, ಜಿ-೭ ದೇಶಗಳು ಮತ್ತು ಜಾಗತಿಕ ದಕ್ಷಿಣ ರಾಷ್ಟ್ರಗಳ ಸಾಮರ್ಥ್ಯವನ್ನು ಜೋಡಿಸುವ ಮೂಲಕ ವ್ಯಾಪಾರ ಹಾಗೂ ಸಂಪರ್ಕವನ್ನು ವೃದ್ಧಿಸುವ ಹೊಸ ಚೌಕಟ್ಟನ್ನು ಪ್ರಸ್ತಾಪಿಸಿದರು. ಶೃಂಗಸಭೆಯ ಸಂದರ್ಭದಲ್ಲಿ ಪ್ರಧಾನಿಯವರು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್, ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಸೇರಿದಂತೆ ಹಲವು ಜಾಗತಿಕ ನಾಯಕರನ್ನು ಭೇಟಿಯಾಗಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ವಿಶೇಷವಾಗಿ ಅಧ್ಯಕ್ಷ ಟ್ರಂಪ್ ಅವರೊಂದಿಗಿನ ಭೇಟಿಯಲ್ಲಿ, ಇರಾನ್ ಜೊತೆಗಿನ ವಾಷಿಂಗ್ಟನ್ ಶಾಂತಿ ಒಪ್ಪಂದದ ಅನುಷ್ಠಾನದ ಸಮಯದಲ್ಲಿ ಭಾರತೀಯ ನಾವಿಕರ ಸುರಕ್ಷತೆಗೆ ಅತ್ಯುನ್ನತ ಆದ್ಯತೆ ನೀಡಬೇಕೆಂದು ಪ್ರಧಾನಿ ಮನವಿ ಮಾಡಿದರು.

<><><><>

ಫ್ರಾನ್ಸ್‌ನ ಎವಿಯನ್‌ನಲ್ಲಿ ನಡೆದ ಜಿ-೭ ಶೃಂಗಸಭೆಯಲ್ಲಿ ಜಾಗತಿಕ ಸ್ಥಿರತೆ ಮತ್ತು ಸುಸ್ಥಿರ ಬೆಳವಣಿಗೆಗೆ ಪೂರಕವಾದ ಮೂರು ಪ್ರಮುಖ ಘೋಷಣಾ ಪತ್ರಗಳನ್ನು ಅಂಗೀಕರಿಸಲಾಗಿದೆ. ಸಮತೋಲಿತ ಆರ್ಥಿಕ ಪ್ರಗತಿ, ಸ್ಥಿರ ಇಂಧನ ಮಾರುಕಟ್ಟೆ ಹಾಗೂ ಪೂರೈಕೆ ಸರಪಳಿಯ ಬಲವರ್ಧನೆಗೆ ಶೃಂಗಸಭೆಯಲ್ಲಿ ಒತ್ತು ನೀಡಲಾಗಿದ್ದು, ಜಾಗತಿಕ ಆರ್ಥಿಕ ಸಂಸ್ಥೆಗಳ ಸುಧಾರಣೆಗೆ ಕರೆ ನೀಡಲಾಗಿದೆ. ಹಾರ್ಮುಜ್ ಜಲಸಂಧಿಯಲ್ಲಿ ಸುರಕ್ಷಿತ ನೌಕಾಯಾನ ಮರುಸ್ಥಾಪನೆ ಹಾಗೂ ಅನಿಯಂತ್ರಿತ ರಫ್ತು ನಿರ್ಬಂಧಗಳ ನಿವಾರಣೆಗೆ ಆಗ್ರಹಿಸಿರುವ ನಾಯಕರು, ಕೃತಕ ಬುದ್ಧಿಮತ್ತೆ ಮತ್ತು ಕ್ವಾಂಟಮ್ ತಂತ್ರಜ್ಞಾನಗಳ ಸವಾಲುಗಳನ್ನು ಎದುರಿಸಲು ಹೆಚ್ಚಿನ ಸಿದ್ಧತೆಯ ಅಗತ್ಯತೆಯನ್ನು ಒತ್ತಿಹೇಳಿದ್ದಾರೆ. ಇದೇ ವೇಳೆ, ಅಪ್ರಾಪ್ತ ವಯಸ್ಕರಿಗೆ ಸುರಕ್ಷಿತ ಡಿಜಿಟಲ್ ಜಾಗವನ್ನು ನಿರ್ಮಿಸುವ ಜಿ-೭ ಘೋಷಣೆಗೆ ಭಾರತ, ಬ್ರೆಜಿಲ್, ಈಜಿಪ್ಟ್, ಕೀನ್ಯಾ ಮತ್ತು ದಕ್ಷಿಣ ಕೊರಿಯಾ ದೇಶಗಳು ಸಂಪೂರ್ಣ ಬೆಂಬಲ ಸೂಚಿಸಿವೆ. ಡಿಜಿಟಲ್ ವೇದಿಕೆಗಳಲ್ಲಿ ಕಟ್ಟುನಿಟ್ಟಿನ

ವಯಸ್ಸಿನ ದೃಢೀಕರಣ, ಪೋಷಕರ ನಿಯಂತ್ರಣ ಹಾಗೂ ಡೀಪ್‌ಫೇಕ್ ಮತ್ತು ಕೃತಕ ಬುದ್ಧಿಮತ್ತೆಯ ಅಪಾಯಗಳಿಂದ ಮಕ್ಕಳನ್ನು ರಕ್ಷಿಸುವ ಕ್ರಮಗಳಿಗೆ ಜಿ-೭ ಕರೆ ನೀಡಿದೆ. ಆನ್‌ಲೈನ್‌ನಲ್ಲಿ ಮಕ್ಕಳ ಶೋಷಣೆ ಮತ್ತು ಲೈಂಗಿಕ ದೌರ್ಜನ್ಯದ ವಿರುದ್ಧ ಶೂನ್ಯ ಸಹಿಷ್ಣುತೆಯ ನೀತಿಯನ್ನು ಒಕ್ಕೂಟವು ಪುನರುಚ್ಚರಿಸಿದೆ.

<><><>

ಭಾರತ ಮತ್ತು ಯುಕೆ ನಡುವಿನ ಐತಿಹಾಸಿಕ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ ಇದೇ ವರ್ಷದ ಜುಲೈ ೧೫ರಿಂದ ಅಧಿಕೃತವಾಗಿ ಜಾರಿಗೆ ಬರಲಿದೆ ಎಂದು ಉಭಯ ದೇಶಗಳು ಜಂಟಿಯಾಗಿ ಘೋಷಿಸಿವೆ. ಇದರ ಜೊತೆಗೆ ಉದ್ಯೋಗಿಗಳ ಸಾಮಾಜಿಕ ಭದ್ರತೆಗೆ ಸಂಬಂಧಿಸಿದ ಡಬಲ್ ಕಾಂಟ್ರಿಬ್ಯೂಷನ್ ಕನ್ವೆನ್ಷನ್ ಡಿಸಿಸಿ ಒಪ್ಪಂದವೂ ಸಹ ಏಕಕಾಲದಲ್ಲಿ ಅನುಷ್ಠಾನಕ್ಕೆ ಬರಲಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ತಿಳಿಸಿದೆ. ಈ ಒಪ್ಪಂದದ ಅಡಿಯಲ್ಲಿ ವಿನಾಯಿತಿ ಅವಧಿಯನ್ನು ೩ ರಿಂದ ೫ ವರ್ಷಗಳಿಗೆ ಹೆಚ್ಚಿಸಲಾಗಿದ್ದು, ಇದು ಯುಕೆಯಲ್ಲಿರುವ ಭಾರತದ ತಾತ್ಕಾಲಿಕ ಉದ್ಯೋಗಿಗಳಿಗೆ ಅನುಕೂಲ ಕಲ್ಪಿಸಲಿದೆ. ಈ ಜಂಟಿ ಒಪ್ಪಂದವನ್ನು ಆರ್ಥಿಕ ರಾಜತಾಂತ್ರಿಕತೆಯ ಮಹತ್ವದ ವಿಜಯ ಎಂದು ಕೇಂದ್ರ ಸಚಿವ ಪಿಯೂಷ್ ಗೋಯಲ್ ಶ್ಲಾಘಿಸಿದ್ದಾರೆ. ಈ ಮೈತ್ರಿಯಿಂದಾಗಿ ಭಾರತ ಯುಕೆ ಮಾರುಕಟ್ಟೆಯಲ್ಲಿ ಶೇಕಡ ೯೯ರಷ್ಟು ಸುಂಕದ ಶ್ರೇಣಿಗಳ ಮೇಲೆ ತಕ್ಷಣದ ಸುಂಕ ಮುಕ್ತ ಪ್ರವೇಶವನ್ನು ಪಡೆದುಕೊಂಡಿದೆ.

<><><>

ಜಾರ್ಖಂಡ್‌ನ ಎರಡು ರಾಜ್ಯಸಭಾ ಸ್ಥಾನಗಳಿಗೆ ಇಂದು ಮತದಾನ ನಡೆಯಲಿದೆ. ಚುನಾವಣಾ ಕಣದಲ್ಲಿ ಜಾರ್ಖಂಡ್ ಮುಕ್ತಿ ಮೋರ್ಚಾ ಜೆಎಂಎಂ ಪಕ್ಷದ ಅಭ್ಯರ್ಥಿ ಬೈದ್ಯನಾಥ್ ರಾಮ್, ಕಾಂಗ್ರೆಸ್ ಅಭ್ಯರ್ಥಿ ಪ್ರಣವ್‌ಝಾ ಮತ್ತು ಪಕ್ಷೇತರ ಅಭ್ಯರ್ಥಿ ಪರಿಮಳ್ ನತ್ವಾನಿ ಸ್ಪರ್ಧೆಯಲ್ಲಿದ್ದಾರೆ. ಬೆಳಗ್ಗೆ ೯ ಗಂಟೆಯಿಂದ ಸಂಜೆ ೪ ಗಂಟೆಯವರೆಗೆ ಮತದಾನ ಪ್ರಕ್ರಿಯೆ ಜರುಗಲಿದ್ದು, ಸಂಜೆ ೫ ಗಂಟೆಗೆ ಮತ ಎಣಿಕೆ ಕಾರ್ಯ ಆರಂಭವಾಗಲಿದೆ. ಮತ ಎಣಿಕೆ ಪೂರ್ಣಗೊಂಡ ತಕ್ಷಣ ಫಲಿತಾಂಶ ಅಧಿಕೃತವಾಗಿ ಪ್ರಕಟಿಸಲಾಗುವುದು ಎಂದು ಚುನಾವಣಾಧಿಕಾರಿಗಳು ತಿಳಿಸಿದ್ದಾರೆ. ಕರ್ನಾಟಕ ವಿಧಾನಪರಿಷತ್‌ನ ಏಳು ಸ್ಥಾನಗಳಿಗೆ ಇಂದು ಚುನಾವಣೆ ನಡೆಯಲಿದೆ. ಒಟ್ಟು ೮ ಅಭ್ಯರ್ಥಿಗಳು ಕಣದಲ್ಲಿ ಇದ್ದಾರೆ. ಕಾಂಗ್ರೆಸ್‌ನ ೪ ಹಾಗೂ ಬಿಜೆಪಿಯ ಇಬ್ಬರು ಅಭ್ಯರ್ಥಿಗಳು ಸರಾಗವಾಗಿ ಗೆಲುವು ಸಾಧಿಸಲಿದ್ದಾರೆ. ೭ನೇ ಸ್ಥಾನಕ್ಕೆ

ಕಾಂಗ್ರೆಸ್ ಅಭ್ಯರ್ಥಿ ವಿನಯ್ ಕಾರ್ತಿಕ್ ಹಾಗೂ ಗೋವಿಂದರಾಜು ನಡುವೆ ಸ್ಪರ್ಧೆ ಏರ್ಪಟ್ಟಿದೆ. ಪರಿಷತ್ ಚುನಾವಣೆಗೆ ಕಾಂಗ್ರೆಸ್‌ನಿಂದ ಬಿ.ಕೆ.ಹರಿಪ್ರಸಾದ್, ತಿಪ್ಪಣ್ಣಪ್ಪ ಕಮಕನೂರು, ಪಿ.ವಿ.ಮೋಹನ್, ಶಿವಣ್ಣ ಮಳವಳ್ಳಿ, ವಿನಯ್ ಕಾರ್ತೀಕ್ ಕಣದಲ್ಲಿದ್ದಾರೆ. ಬಿಜೆಪಿಯಿಂದ ಲಿಂಗಾರಾಜ್ ಪಾಟೀಲ್ ಹಾಗೂ ರಘುಕೌಟಿಲ್ಯ, ಬಿಜೆಪಿ-ಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿಯಾಗಿ ಗೋವಿಂದರಾಜು ಕಣಕ್ಕಿಳಿದಿದ್ದಾರೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ್ ೫ ದಿನಗಳ ಭೇಟಿಗಾಗಿ ಮಧ್ಯಪ್ರದೇಶ ಮತ್ತು ಒಡಿಶಾಗೆ ಪ್ರವಾಸ ಕೈಗೊಳ್ಳಲಿದ್ದಾರೆ. ತಮ್ಮ ಭೇಟಿಯ ಮೊದಲ ದಿನದಂದು ರಾಷ್ಟ್ರಪತಿ ಮಧ್ಯಪ್ರದೇಶದ ಬೆತುಲ್‌ನಲ್ಲಿ ಆಯೋಜಿಸಲಾಗಿರುವ 'ಆಧ್ಯಾತ್ಮಿಕ ಜಾಗೃತಿಯ ಮೂಲಕ ಬುಡಕಟ್ಟು ಸಮಾಜದ ಸಬಲೀಕರಣ' ಎಂಬ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಎರಡನೇ ದಿನದಂದು ಅವರು, ಓಂಕಾರೇಶ್ವರದಲ್ಲಿ ನಡೆಯಲಿರುವ ಅಂತಾರಾಷ್ಟ್ರೀಯ ಸಿಕಲ್‌ಸೆಲ್ ದಿನಾಚರಣೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ತದನಂತರ ಒಡಿಶಾದ ರಾಯರಂಗ್‌ಪುರಕ್ಕೆ ಭೇಟಿ ನೀಡಲಿರುವ ಅವರು, ಏಮ್ಸ್ ಭುವನೇಶ್ವರ ವತಿಯಿಂದ ಆಯೋಜಿಸಲಾದ ವೈದ್ಯಕೀಯ ಶಿಬಿರನ್ನು ಉದ್ಘಾಟಿಸಲಿದ್ದು, ಇದೇ ವೇಳೆ ಕುಸಿಮಿ ಬ್ಲಾಕ್ ವ್ಯಾಪ್ತಿಯ ಗಣಿಗಾರಿಕಾ ಪೀಡಿತ ಗ್ರಾಮಗಳಿಗೆ ಹಮ್ಮಿಕೊಳ್ಳಲಾಗಿರುವ ಬೃಹತ್ ಸಂಯೋಜಿತ ಗ್ರಾಮೀಣ ಕೊಳವೆ ನೀರು ಸರಬರಾಜು ಯೋಜನೆಯನ್ನು ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ. ಇದೇ ೨೧ ರಂದು ರಾಷ್ಟ್ರಪತಿ ಜಬಲ್‌ಪುರದಲ್ಲಿ ನಡೆಯಲಿರುವ ಅಂತಾರಾಷ್ಟ್ರೀಯ ಯೋಗದಿನದಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ಐದು ದಿನಗಳಾದ್ಯಂತ ರಾಷ್ಟ್ರಪತಿಯವರು ಇತರ ಹಲವು ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರ ದೂರದರ್ಶಿ ನಾಯಕತ್ವದಡಿ 'ಸಬ್ ಕಾ ಸಾತ್, ಸಬ್ ಕಾ ವಿಕಾಸ್, ಸಬ್ ಕಾ ವಿಶ್ವಾಸ್ ಮತ್ತು ಸಬ್ ಕಾ ಪ್ರಯಾಸ್' ತತ್ವಗಳೊಂದಿಗೆ ಭಾರತ ಕಳೆದ ೧೨ ವರ್ಷಗಳಲ್ಲಿ ಅಭೂತಪೂರ್ವ ಪರಿವರ್ತನೆಗೆ ಸಾಕ್ಷಿಯಾಗಿದೆ. ಕೇಂದ್ರ ಸರ್ಕಾರದ ಸಮನ್ವಯ ಮತ್ತು ಬಹುಮುಖ್ಯ ಕಾರ್ಯತಂತ್ರ ದೇಶವನ್ನು ನಕ್ಸಲಿಸಂ ಮತ್ತು ಮಾವೋವಾದಿ ಭಯೋತ್ಪಾದನೆಯಿಂದ ಮುಕ್ತಗೊಳಿಸುವಲ್ಲಿ ಯಶಸ್ವಿಯಾಗಿದೆ. ಕಟ್ಟುನಿಟ್ಟಿನ ಭದ್ರತಾ ಕಾರ್ಯಚರಣೆ ಆರ್ಥಿಕ ಸಂಪನ್ಮೂಲಗಳ ತಡೆ ಹಾಗೂ ತ್ವರಿತ ಅಭಿವೃದ್ಧಿ ಯೋಜನೆಗಳ

ಅನುಷ್ಠಾನ ಈ ಪ್ರಮುಖ ಬದಲಾವಣೆಗೆ ಕಾರಣವಾಗಿದೆ. ಆಪರೇಷನ್ ಅಕ್ಟೋಪಸ್, ಆಪರೇಷನ್ ಡಬಲ್ ಬುಲ್, ಆಪರೇಷನ್ ತಂಡರ್ ಸ್ಟಾರ್ಮ್, ಆಪರೇಷನ್ ಬ್ಲಾಕ್ ಫಾರೆಸ್ಟ್ ಇಂತಹ ಅನೇಕ ಕಾರ್ಯಾಚರಣೆಗಳು ಮಾವೋವಾದಿಗಳನ್ನು ಹತ್ತಿಕ್ಕುವಲ್ಲಿ ಪ್ರಮುಖ ಪಾತ್ರ ವಹಿಸಿವೆ.

<><><><>

ಲೀಡ್ಸ್‌ನ ಹೆಡಿಂಗ್ಲೆಯಲ್ಲಿ ನಿನ್ನೆ ರಾತ್ರಿ ನಡೆದ ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್ ಟೂರ್ನಿಯ 'ಎ' ಗುಂಪಿನ ಪಂದ್ಯದಲ್ಲಿ ಭಾರತೀಯ ವನಿತಾ ತಂಡ ನೆದರ್‌ಲೆಂಡ್ಸ್ ತಂಡವನ್ನು ೯೫ ರನ್‌ಗಳಿಂದ ಮಣಿಸಿದೆ. ಸ್ಮೃತಿ ಮಂಧಾನ ಅವರ ೭೪ ಹಾಗೂ ಶೆಫಾಲಿ ವರ್ಮಾಅವರ ೫೫ ರನ್‌ಗಳ ನೆರವಿನೊಂದಿಗೆ ಭಾರತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೦೯ ರನ್‌ಗಳಿಸಿತು. ೨೧೦ ರನ್‌ಗಳ ಗುರಿ ಬೆನ್ನತ್ತಿದ ನೆದರ್‌ಲೆಂಡ್ಸ್ ೧೭.೩ ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು ೧೧೪ ರನ್‌ಗಳಿಸಲಷ್ಟೇ ಶಕ್ತವಾಯಿತು. ಸ್ಮೃತಿ ಮಂಧಾನಗೆ ಪಂದ್ಯಶ್ರೇಷ್ಠ ಆಟಗಾರ್ತಿ ಪ್ರಶಸ್ತಿ ನೀಡಲಾಯಿತು.

<><><><>

ಲಖನೌನಲ್ಲಿ ನಿನ್ನೆ ನಡೆದ ಮೂರು ಪಂದ್ಯಗಳ ಏಕದಿನ ಕ್ರಿಕೆಟ್ ಸರಣಿಯ ೨ನೇ ಪಂದ್ಯದಲ್ಲಿ ಭಾರತ ತಂಡ ಅಫ್ಗಾನಿಸ್ತಾನ್ ತಂಡವನ್ನು ೧೭೦ ರನ್‌ಗಳಿಂದ ಮಣಿಸಿದೆ. ಆ ಮೂಲಕ ಸರಣಿಯಲ್ಲಿ ೨-೦ ಅಂತರದ ಮುನ್ನಡೆ ಸಾಧಿಸಿ ಸರಣಿ ಕೈವಶ ಮಾಡಿಕೊಂಡಿದೆ. ಮೊದಲು ಬ್ಯಾಟ್ ಮಾಡಿದ ಭಾರತ ೪೯.೫ ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು ೪೦೨ ರನ್ ಗಳಿಸಿತು. ೧೫೪ ರನ್‌ಗಳೊಂದಿಗೆ ಶುಭ್ಮನ್ ಗಿಲ್ ಹಾಗೂ ೧೨೫ ರನ್‌ಗಳೊಂದಿಗೆ ಇಶಾನ್ ಕಿಶನ್ ತಂಡದ ಬೃಹತ್ ಮೊತ್ತಕ್ಕೆ ಕಾರಣರಾದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>